# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1427

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 30-12-2022

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೃಷಿ ಕುರಿತ ಯೋಜನೆಗಳಾವುವು; ಅವುಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳಾವುವು; (ವಿವರ ನೀಡುವುದು) | ರಾಜ್ಯದಲ್ಲಿ ಕೃಷಿ ಕುರಿತು ಕೃಷಿ ಇಲಾಖೆಯ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ಹಾಗೂ ಅವುಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |
| ಆ) | ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕೃಷಿ ಕುರಿತ ಯೋಜನೆಗಳಾವುವು; ಅವುಗಳಿಗೆ ಅಗತ್ಯವಿರುವಷ್ಟು ಅನುದಾನ ಬಿಡುಗಡೆಯಾಗುತ್ತಿದೆಯೇ; ಬಿಡುಗಡೆಯಾಗದಿದ್ದಲ್ಲಿ, ಕಾರಣವೇನು; (ಯೋಜನೆವಾರು ವಿವರ ನೀಡುವುದು) | ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕೃಷಿ ಇಲಾಖೆಯ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. ವಿವಿಧ ಯೋಜನೆಗಳಡಿ ಅಗತ್ಯಕ್ಕನುಗುಣವಾಗಿ ಅನುದಾನ ಬಿಡುಗಡೆಯಾಗುತ್ತಿದೆ. |
| ಇ) | ವರ್ಷದಿಂದ ವರ್ಷಕ್ಕೆ ಕೃಷಿ ಇಲಾಖೆಯು ವಿವಿಧ ಯೋಜನೆಗಳಲ್ಲಿ ತಾಲ್ಲೂಕಿಗೆ ನಿಗಧಿಪಡಿಸಲಾಗುವ ಫಲಾನುಭವಿಗಳ ಗುರಿ ಕಡಿಮೆಯಾಗುತ್ತಿದೆಯೇ; ಬೇಡಿಕೆ ಹೆಚ್ಚಿದರೂ ಇಲಾಖೆ ಗುರಿ ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2020-21 ಮತ್ತು 2021-22ನೇ ಸಾಲಿನಲ್ಲಿ ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿ ತಾಲ್ಲೂಕುವಾರು ಒದಗಿಸಿದ ಅನುದಾನಗಳ ಅಂಕಿ-ಅಂಶಗಳ ಅನ್ವಯ ಅನುದಾನ ಮತ್ತು ಫಲಾನುಭವಿಗಳ ಗುರಿ ಕಡಿಮೆಯಾಗಿರುವುದಿಲ್ಲ. |

| | | |
|---|---|---|
| ಈ) | ಈ ಮೊದಲು ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಜಾರಿಯಲ್ಲಿದ್ದ ಭತ್ತದ ಕೃಷಿಗೆ ಕರಾವಳಿ ಪ್ಯಾಕೇಜ್ ನಿಲ್ಲಿಸಲಾಗಿದೆಯೇ; ನಿಲ್ಲಿಸಿದ್ದಲ್ಲಿ ಇದಕ್ಕೆ ಕಾರಣಗಳೇನು; ಸದರಿ ಕರಾವಳಿ ಪ್ಯಾಕೇಜ್ ಪುನಃ ಪ್ರಾರಂಭಿಸಲಾಗುವುದೇ; (ವಿವರ ನೀಡುವುದು) | ಈ ಮೊದಲು ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಜಾರಿಯಲ್ಲಿದ್ದ ಭತ್ತದ ಕೃಷಿಗೆ ಕರಾವಳಿ ಪ್ಯಾಕೇಜ್ ನಿಲ್ಲಿಸಲಾಗಿರುತ್ತದೆ.<br><br>ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತರಿಗೆ 3 ಕಂತುಗಳಲ್ಲಿ ನೀಡುವ ರೂ.6000/-ಗಳ ಜೊತೆಗೆ ರಾಜ್ಯ ಸರ್ಕಾರದಿಂದ ರೂ.4000/-ಗಳನ್ನು 2 ಕಂತುಗಳಲ್ಲಿ ನೀಡುತ್ತಿರುವುದರಿಂದ, ಕರಾವಳಿ ಪ್ಯಾಕೇಜ್ ನಿಲ್ಲಿಸಲಾಗಿರುತ್ತದೆ.<br><br>ಸದರಿ ಕರಾವಳಿ ಪ್ಯಾಕೇಜ್ ಪುನಃ ಪ್ರಾರಂಭಿಸುವ ಉದ್ದೇಶ ಇರುವುದಿಲ್ಲ. |
| ಉ) | ಕೃಷಿ ವಿಸ್ತರಣೆ ಮಾಡಲು ಸರ್ಕಾರದ ಕಾರ್ಯಕ್ರಮಗಳೇನು; ಸದರಿ ಕಾರ್ಯಕ್ರಮಗಳ ರೂಪುರೇಷಗಳೇನು? (ವಿವರ ನೀಡುವುದು) | ಕೃಷಿ ವಿಸ್ತರಣೆ ಮಾಡಲು ಹಾಗೂ ರೈತರಿಗೆ ಸಂಬಂಧಿಸಿದ ಸರ್ಕಾರದ ಯೋಜನೆಗಳ ಮಾಹಿತಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br><br>ಕೃಷಿ ಇಲಾಖೆಯಲ್ಲಿ ದೊರೆಯುವ ಸೌಲಭ್ಯ/ಸೇವೆಗಳ ಬಗ್ಗೆ ಮಾಹಿತಿ ನೀಡಲು ಹೋಬಳಿ ಮಟ್ಟದಲ್ಲಿ ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ಅಧಿಕಾರಿ ಮತ್ತು ಆತ್ಮ ಸಿಬ್ಬಂದಿ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಜರಿದ್ದು ರೈತರಿಗೆ ಮಾಹಿತಿ ನೀಡುತ್ತಾರೆ. ರೈತರ ತರಬೇತಿ, ಗ್ರಾಮ ಸಭೆ ಇತರೆ ಕಾರ್ಯಕ್ರಮಗಳಲ್ಲಿ ಇಲಾಖೆಯಲ್ಲಿ ಲಭ್ಯವಿರುವ ಯೋಜನೆಗಳ ಬಗ್ಗೆ ತಿಳಿಸಲಾಗುತ್ತಿದೆ ಹಾಗೂ ಸೌಲಭ್ಯಗಳನ್ನು ನಿಯಮಿತವಾಗಿ ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಇಲಾಖಾ ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಾರೆ.<br><br>**ಕೃಷಿ ವಿಸ್ತರಣೆಯಲ್ಲಿ ಈ ಕೆಳಗಿನ ಮಾಹಿತಿಗಳನ್ನು ನೀಡಲಾಗುತ್ತದೆ;**<br><br>1.ಬೆಳೆ ಆಯ್ಕೆ, ಬೆಳೆ ಉತ್ಪಾದನಾ ಕಾರ್ಯಕ್ರಮಗಳು ಮಾರುಕಟ್ಟೆ ಮಾಹಿತಿ ಮುಂತಾದ ವಿಷಯಗಳ ಬಗ್ಗೆ ಹಾಗೂ ರೈತರಿಗೆ ಆಧುನಿಕ ಕೃಷಿ ಕುರಿತು ಮಾಹಿತಿ ನೀಡಲಾಗುತ್ತಿದೆ.<br>2.ಕೃಷಿ ಪರಿಕರಗಳಾದ ಬೀಜ, ರಸಗೊಬ್ಬರ, ಸಸ್ಯ ಸಂರಕ್ಷಣಾ ಔಷಧಿ ಮುಂತಾವುಗಳನ್ನು ಸ್ಥಳೀಯವಾಗಿ ಸಂಯೋಜನೆ ಮಾಡಿ ಒದಲಾಗಿಸಲಾಗುತ್ತಿದೆ.<br>3.ಬೀಜ ಮೊಳಕೆ ಮತ್ತು ಗುಣಮಟ್ಟ ಪರೀಕ್ಷೆ, ಮಣ್ಣು ಪರೀಕ್ಷೆ ಇತ್ಯಾದಿ ಮೂಲ ಪರೀಕ್ಷಾ ಸೌಲಭ್ಯಗಳನ್ನು ಸ್ಥಳೀಯವಾಗಿ |

| | | |
|---|---|---|
| | | ಒದಲಾಗಿಸಲಾಗುತ್ತಿದೆ.<br>4.ಸಾರ್ವಜನಿಕ ಮತ್ತು ಖಾಸಗಿ ವಲಯಗಳ ಬಿತ್ತನೆ ಮತ್ತು ಇತರ ಪರಿಕರಗಳ (ತಾಂತ್ರಿಕತೆಗಳು) ಪ್ರಾತ್ಯಕ್ಷಿಕೆಗಾಗಿ ಸೌಲಭ್ಯ ಒದಲಾಗಿಸಲಾಗುತ್ತಿದೆ.<br>5.ಸಾರ್ವಜನಿಕ ಮತ್ತು ಖಾಸಗಿ ರಂಗಗಳ ತಂತ್ರಜ್ಞಾನ ಮತ್ತು ಪರಿಕರಗಳ ತುಲನೆ/ಪರಿಶೀಲನೆಗೆ ಅವಕಾಶ ಒದಲಾಗಿಸಲಾಗುತ್ತಿದೆ.<br><br>ಮುಂದುವರೆದು, ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡುವ ರೈತರಿಗೆ ಅವಶ್ಯಕ ತಾಂತ್ರಿಕ ಸಲಹೆ ಮತ್ತು ಮಾರ್ಗದರ್ಶನ ನೀಡುವುದು. ನಿಯಮಿತವಾಗಿ ಗುಂಪುವಾರು ಭೇಟಿ ಕಾರ್ಯಕ್ರಮದ ಅನ್ವಯ ಕ್ಷೇತ್ರ ಭೇಟಿ, ವಿಸ್ತರಣಾ ಕಾರ್ಯ ಹಾಗೂ ಇಲಾಖೆಯ ವಿವಿಧ ಯೋಜನೆಗಳನ್ನು /ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು. ಪೋಸ್ಟರ್, ಕರಪತ್ರಗಳ ಮುಖಾಂತರ, ಗ್ರಾಮಸಭೆಗಳು ಮತ್ತು ತರಬೇತಿಗಳಲ್ಲಿ ಜನಪ್ರತಿನಿಧಿಗಳಿಗೆ ಹಾಗೂ ರೈತರಿಗೆ ಇಲಾಖಾ ಯೋಜನೆಗಳ ಬಗ್ಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿವೆ.<br><br>ಪ್ರಸ್ತುತ ರೈತ ಸಂಪರ್ಕ ಕೇಂದ್ರಗಳನ್ನು ರೈತರಿಗೆ ಮಾಹಿತಿ ತಂತ್ರಜ್ಞಾನ ವಿನಿಮಯಕ್ಕೆ ಹೆಚ್ಚಿನ ಒತ್ತು ನೀಡುವುದರ ಮೂಲಕ ನೋಡಲ್ ಕ್ರಿಯಾಶೀಲ ಕೇಂದ್ರಗಳಾಗಿ ಬಲಪಡಿಸಲು ಹಾಗೂ ರೈತರ ಆದಾಯವನ್ನು ದ್ವಿಗುಣಗೊಳಿಸಲು ಕ್ಷೇತ್ರಮಟ್ಟದಲ್ಲಿ ಕ್ರಮವಹಿಸಲು ಸರ್ಕಾರದ ಆದೇಶ ಸಂಖ್ಯೆ:AGRI.ACT/112/2019, ಬೆಂಗಳೂರು, ದಿನಾಂಕ: 31.10.2019 ರಂದು ಆದೇಶ ಹೊರಡಿಸಿದೆ. ಸರ್ಕಾರದ ಆದೇಶದಂತೆ ಪ್ರತಿ ತಿಂಗಳ ಮೊದಲನೇ ಮತ್ತು ಮೂರನೇ ಸೋಮವಾರಗಳಂದು ಆಯಾ ಹೋಬಳಿಯ ರೈತರಿಗೆ ಅನುಕೂಲವಾಗುವಂತೆ ರೈತ ಸಂಪರ್ಕ ಕೇಂದ್ರಗಳಲ್ಲಿಯೇ ಸಭೆಗಳನ್ನು ಏರ್ಪಡಿಸಿ ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆಗಳಾದ ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ, ಅರಣ್ಯ, ಮೀನುಗಾರಿಕೆ, ಸಹಕಾರ ಇಲಾಖೆಗಳ ಅಧಿಕಾರಿಗಳ ಉಪಸ್ಥಿತಿಯಲ್ಲಿ ರೈತರಿಗೆ ಈ ಕೆಳಕಂಡಂತೆ ಮಾಹಿತಿಯನ್ನು ನೀಡಲಾಗುತ್ತಿದೆ.<br><br>• ಇಲಾಖೆಗಳ ವಿವಿಧ ಯೋಜನೆಗಳು, ಯೋಜನೆಯ ಸೌಲಭ್ಯ ಪಡೆಯಲು ಬೇಕಾಗುವ ದಾಖಲಾತಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡುವುದು<br>• ನೂತನ ತಾಂತ್ರಿಕತೆಗಳ ಬಗ್ಗೆ |

| | | |
|---|---|---|
| | | • ಮಾರುಕಟ್ಟೆ ಸೌಲಭ್ಯ, ಪ್ರಸ್ತುತ ಕೃಷಿ /ತೋಟಗಾರಿಕೆ/ರೇಷ್ಮೆ ಉತ್ಪನ್ನಗಳ ಮಾರಾಟ ದರ ಕುರಿತು<br>• ಮುಂದಿನ 15 ದಿನಗಳವರೆಗಿನ ಹವಾಮಾನ ಮುನ್ಸೂಚನೆ ಹಾಗೂ ಹವಾಮಾನ ವಿಕೋಪಗಳನ್ನು ಎದುರಿಸಲು ಕೈಗೊಳ್ಳುವ ಕ್ರಮಗಳ ಬಗ್ಗೆ<br>• ಕೀಟ, ರೋಗ ಬರುವ ಸಾಧ್ಯತೆ ಮತ್ತು ನಿರ್ವಹಣೆ, ಬೆಳೆ ವಿಮೆ ನೋಂದಣಿ ಬಗ್ಗೆ ಸೂಕ್ತ ಮಾಹಿತಿಯನ್ನು ಮತ್ತು ರೈತರ ಸಮಸ್ಯೆಗಳಿಗೆ ಸೂಕ್ತ ಪರಿಹಾರಗಳನ್ನು ಸೂಚಿಸಲಾಗುತ್ತಿದೆ<br>• ಸದರಿ ಸಭೆಗಳಲ್ಲಿ ಸಂಬಂಧಿಸಿದ ಕೃಷಿ ಹಾಗೂ ತೋಟಗಾರಿಕಾ ವಿಶ್ವವಿದ್ಯಾಲಯಗಳ ಒಬ್ಬ ವಿಜ್ಞಾನಿ/ ಸಿಬ್ಬಂದಿಯು ಪಾಲ್ಗೊಂಡು ರೈತರ ಸಾಗುವಳಿ ವೆಚ್ಚವನ್ನು ಕಡಿಮೆ ಮಾಡಿ ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳು ಹಾಗೂ ರಸಗೊಬ್ಬರಗಳ ಪೂರೈಕೆ, ನೀರಾವರಿ ಹಾಗೂ ಕೃಷಿ ಯಾಂತ್ರೀಕರಣದ ಮೂಲಕ ಉತ್ಪಾದನೆ ಹಾಗೂ ಉತ್ಪಾದಕತೆ ಹೆಚ್ಚಿಸಿ ಕೊಯ್ಲೋತ್ತರ ನಿರ್ವಹಣೆ, ಮೌಲ್ಯವರ್ಧನೆ ಹಾಗೂ ಉತ್ತಮ ಮಾರಾಟ ಪದ್ಧತಿಗಳ ಮೂಲಕ ರೈತರಿಗೆ ಹೆಚ್ಚಿನ ಲಾಭ ಬರುವ ನಿಟ್ಟಿನಲ್ಲಿ ಮಾಹಿತಿ ನೀಡಲು ಕ್ರಮ ವಹಿಸಿದೆ. ಇದಲ ಇದಲ್ಲದೆ ಈ ಕೆಳಗಿನ ಕಾರ್ಯಕ್ರಮಗಳನ್ನು ಕೃಷಿ ವಿಸ್ತರಣೆಯಲ್ಲಿ ಕೈಗೊಳ್ಳಲಾಗುತ್ತಿದೆ<br><br>✓ ಕೃಷಿ ಅಭಿಯಾನ: ಹೋಬಳಿವಾರು ಇಲಾಖಾ ಕಾರ್ಯ ಕ್ರಮಗಳ ಬಗ್ಗೆ ಹಾಗೂ ಇತರೆ ಸಂಬಂಧಿತ ಇಲಾಖೆಗಳ ಮಾಹಿತಿಯನ್ನು ರೈತರಿಗೆ ಪ್ರಚುರ ಪಡಿಸಲು 3 ದಿನದ ಕಾರ್ಯಕ್ರಮ ಜಾರಿಯಲ್ಲಿದೆ.<br>✓ ಸಿರಿಧಾನ್ಯ ಹಬ್ಬ, ರೋಡ್ ಶೋ, ಪ್ರಚಾರ ಇತ್ಯಾದಿಗಳನ್ನು ಜಿಲ್ಲಾ/ತಾಲ್ಲೂಕು ಮಟ್ಟದಲ್ಲಿ ಆಯೋಜಿಸಲಾಗುತ್ತದೆ.<br>✓ ಜಿಲ್ಲೆಯ ಪ್ರಗತಿಪರ ರೈತರು, ಚುನಾಯಿತ ಪ್ರತಿನಿಧಿಗಳು ಹಾಗೂ ಇಲಾಖಾ ಅಧಿಕಾರಿಗಳ ವಾಟ್ಸ್ ಆಪ್ ಗ್ರೂಪ್ ಮುಖಾಂತರ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿಗಳನ್ನು ನೀಡಲಾಗುತ್ತದೆ.<br>✓ ಇಲಾಖೆಯ ವಿವಿಧ ಕಾರ್ಯಕ್ರಮಗಳು ಪ್ರಮುಖವಾಗಿ ಬೆಳೆ ಸಮೀಕ್ಷೆ ಬಗ್ಗೆ ರೇಡಿಯೋ ಜಿಂಗಲ್ಸ್ ಮೂಲಕ ಬಸ್ ನಿಲ್ದಾಣಗಳಲ್ಲಿ ಮಾಹಿತಿ ಭಿತ್ತರಿಸಲಾಗುತ್ತಿದೆ. |

| | | |
|---|---|---|
| | | ✓ ಗ್ರಾಮಮಟ್ಟದಲ್ಲಿ ರೈತರಿಗೆ ಗೂಗಲ್ ಮೀಟ್ ಮೂಲಕ ಸಭೆಗಳನ್ನು ಆಯೋಜಿಸಲಾಗಿದೆ.<br>✓ ವಿವಿಧ ಯೋಜನೆಗಳಡಿಯಲ್ಲಿ ಆಧುನಿಕ ಕೃಷಿಗೆ ಸಂಬಂಧಿಸಿದಂತೆ ಕರಪತ್ರ, ಭಿತ್ತಿ ಚಿತ್ರ, ಇಲಾಖೆ ಕೈಪಿಡಿ ಮತ್ತು ಆಟೋ ಪ್ರಚಾರ ಮೂಲಕ ರೈತರಿಗೆ ಇಲಾಖಾ ಸೌಲಭ್ಯಗಳ ಬಗ್ಗೆ ಮಾಹಿತಿ ಒದಗಿಸುವ ಜೊತೆಗೆ ಜಿಲ್ಲಾ ತರಬೇತಿ ಕೇಂದ್ರಗಳಲ್ಲಿ ರೈತರಿಗೆ ತರಬೇತಿಗಳನ್ನು ಆಯೋಜಿಸುವ ಮೂಲಕ ಕೃಷಿ ವಿಸ್ತರಣೆಯನ್ನು ಕೈಗೊಳ್ಳಲಾಗುತ್ತದೆ.<br>✓ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜರುಗುವ ಗ್ರಾಮ ಸಭೆಗಳು, ಗ್ರಾಮ ವಾಸ್ತವ್ಯ ಮತ್ತು ಜನಸ್ಪಂದನ ಕಾರ್ಯಕ್ರಮಗಳಲ್ಲಿ ಇಲಾಖಾ ಅಧಿಕಾರಿಗಳು ಕೃಷಿ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. |

ಸಂಖ್ಯೆ : AGRI –AML/288/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

## ಅನುಬಂಧ-1(LCQ 1427)
## 2022-23ನೇ ಸಾಲಿನಲ್ಲಿ ಕೃಷಿ ಕುರಿತು ಕೃಷಿ ಇಲಾಖೆಯ ಯೋಜನೆಗಳ ವಿವರಗಳು

1. **ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15):**

**ಅ) ಬೀಜಗಳ ಪೂರೈಕೆ:** ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು.

**ಆ) ಸಸ್ಯ ಸಂರಕ್ಷಣೆ:** ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆಯ ಜೊತೆಗೆ ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿ ನೀಡಲಾಗುವುದು.

**ಇ) ಮಣ್ಣಿನ ಸತ್ವ ಹೆಚ್ಚಿಸುವಿಕೆ:** ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆಯನ್ನು ಹೆಚ್ಚಿಸಲು ರಿಯಾಯಿತಿ ದರದಲ್ಲಿ ಸಾವಯವ ಗೊಬ್ಬರಗಳು ಇತ್ಯಾದಿಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ನೀಡಲಾಗುವುದು.

**ಈ) ಸಾವಯವ ಇಂಗಾಲ ಅಭಿಯಾನ :** ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣ ಕಡಿಮೆಯಾಗುತ್ತಾ ಬಂದಿದ್ದು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು ಹಾಗೂ ಹಸಿರೆಲೆ ಗೊಬ್ಬರ ಬೀಜ ಮತ್ತು ಸಾವಯವ ಗೊಬ್ಬರಗಳ ಬಳಕೆಯಿಂದ ಸಾವಯವ ಇಂಗಾಲ ಹೆಚ್ಚಿಸುವ ಕುರಿತು ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲಾಗುವುದು.

**ಉ) ಕೃಷಿ ಯಾಂತ್ರೀಕರಣ:** ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆಯಿಂದ ಕೊಯ್ಲಿನವರೆಗೆ ಅವಶ್ಯವಿರುವ ವಿವಿಧ ಕೃಷಿ ಯಂತ್ರೋಪಕರಣಗಳ ಖರೀದಿಗೆ ಸಾಮಾನ್ಯ ರೈತರಿಗೆ ಶೇ.50 ರಷ್ಟು ಹಾಗು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ಒಂದು ಲಕ್ಷ ರೂ.ವರೆಗೆ ನೀಡಲಾಗುತ್ತದೆ. ಟ್ರ್ಯಾಕ್ಟರ್‌ಗಳ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ರೂ.3.00ಲಕ್ಷಗಳ ಸಹಾಯಧನವನ್ನು ನೀಡಲಾಗುತ್ತದೆ.

**ಊ)ಕೃಷಿ ಸಂಸ್ಕರಣೆ:** ಕೃಷಿ ಸಂಸ್ಕರಣಾ ಘಟಕಗಳು, ಸಣ್ಣ ಯಂತ್ರ ಚಾಲಿತ ಎಣ್ಣೆಗಾಣಗಳು ಮತ್ತು ಟಾರ್ಪಾಲಿನ್ ಗಳನ್ನು ಖರೀದಿಸಲು ಸಾಮಾನ್ಯ ರೈತರಿಗೆ ಶೇ.50 ರಷ್ಟು ಹಾಗು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ನೀಡಲಾಗುವುದು.

**ಋ) ಕೃಷಿ ಯಂತ್ರಧಾರೆ:** ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ

ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದು ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗುವುದು.

**ಎ) ರೈತ ಶಕ್ತಿ:** ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಹಾಗೂ ಇಂಧನ ವೆಚ್ಚದ ಭಾರವನ್ನು ಕಡಿಮೆ ಮಾಡಲು ಪ್ರತಿ ಎಕರೆಗೆ ರೂ.250.0ರಂತೆ ಗರಿಷ್ಠ 5 ಎಕರೆಗಳಿಗೆ ಡಿ.ಬಿ.ಟಿ ಮೂಲಕ ಡೀಸೆಲ್ ಗೆ ಸಹಾಯಧನವನ್ನು ನೀಡಲಾಗುವುದು.

2. **ರೈತ ಸಿರಿ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

3. **ರೈತರ ಪ್ರೋತ್ಸಾಹ ಮತ್ತು ಬೆಂಬಲ ಯೋಜನೆಗಳು(2401-00-102-0-28)**

**ಅ) ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:** ರೈತರಲ್ಲಿ ಹೆಚ್ಚಿನ ಉತ್ಪಾದನೆ ಮಾಡುವ ಮನೋಭಾವ ಉಂಟು ಮಾಡಲು ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಬೆಳೆ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನಗಳನ್ನು ನೀಡಲಾಗುತ್ತದೆ. ಕೃಷಿ ಕ್ಷೇತ್ರದಲ್ಲಿ ಅಮೂಲ್ಯ ಅನ್ವೇಷಣೆ ಹಾಗೂ ಸೃಜನಾತ್ಮಕ ಕಾರ್ಯಗಳನ್ನು ಕೈಗೊಂಡ ರೈತರನ್ನು ಗುರುತಿಸಿ ಅವರುಗಳಿಗೆ ಪ್ರಶಸ್ತಿ ನೀಡಲಾಗುತ್ತಿದೆ. ರಾಜ್ಯ ಮಟ್ಟದ ವಿಜೇತರನ್ನು ಸನ್ಮಾನಿಸುವ ಸಂಬಂಧ ತಗಲುವ ಎಲ್ಲಾ ವೆಚ್ಚಗಳನ್ನು ಭರಿಸಲಾಗುತ್ತದೆ.

**ಆ) ಬೆಳೆ ಸಾಲಕ್ಕೆ ಸಹಾಯಧನ:** ರಾಜ್ಯದ ರೈತರಿಗೆ ನೀಡಿದ ಬೆಳೆ ಸಾಲ/ ಅಲ್ಪಾವಧಿ ಸಾಲಕ್ಕೆ ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡಿದ ರೈತರಿಗೆ ಶೇ.1ರ ಬಡ್ಡಿ ರಿಯಾಯಿತಿ ನೀಡಲು (ಸರ್ಕಾರಿ ಸ್ವಾಮ್ಯದ ವಾಣಿಜ್ಯ ಬ್ಯಾಂಕುಗಳು ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ ಗರಿಷ್ಠ 1.00 ಲಕ್ಷ ಮಿತಿಯೊಳಗೆ) ಬಳಸಿಕೊಳ್ಳಲಾಗುವುದು.

4. **ಕೃಷಿ ವಿಸ್ತರಣೆ ಮತ್ತು ತರಬೇತಿ (2401-00-109-0-21):**

**ಅ) ಕೃಷಿ ಅಭಿಯಾನ, ಮೇಳಗಳು ಮತ್ತು ವಸ್ತು ಪ್ರದರ್ಶನ:** ಕೃಷಿ ಅಭಿಯಾನದಡಿ ಹೋಬಳಿ ಮಟ್ಟದಲ್ಲಿ ಕೃಷಿ ಮತ್ತು ಸಂಬಂಧಿತ ಇಲಾಖೆಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾಹಿತಿಯನ್ನು ಏಕ ಗವಾಕ್ಷಿ ವಿಸ್ತರಣಾ ಪದ್ಧತಿಯಲ್ಲಿ ಪ್ರಚಾರ, ಕೃಷಿ ಜಾತ್ರೆ, ವಸ್ತು ಪ್ರದರ್ಶನಗಳ ಆಯೋಜನೆ ಮಾಡಲಾಗುವುದು.

**ಆ) ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುವುದು.

5. **ಹೊಸ ಬೆಳೆ ವಿಮಾ ಯೋಜನೆ (2401-00-110-0-07):** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುವುದು ಹಾಗೂ ಬೆಳೆ ಸಮೀಕ್ಷೆ,

ಕಾರ್ಯಕ್ಕೆ ಮತ್ತು ಬೆಳೆ ವಿಮೆ ಯೋಜನೆಗಳಿಗೆ ಸಂಬಂಧಿಸಿದಂತೆ ಅಗತ್ಯ ವೆಚ್ಚ ಭರಿಸಲಾಗುವುದು.

6. **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ (2401-00-800-1-05):** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕ ರೂ.6000/-ಗಳ ನಗದನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ: 14-08-2019 ರಿಂದ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ರೂ.4000/-ಗಳನ್ನು ಎರಡು ಕಂತುಗಳಲ್ಲಿ ಆರ್ಥಿಕ ನೆರವನ್ನುಸದರಿ ಯೋಜನೆಯಡಿ ನೀಡಲಾಗುತ್ತದೆ.

7. **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ(2401-00-102-0-08):** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬತ್ತ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು ಉತ್ಪಾದನಗೆ ಬಿತ್ತನೆ ಬೀಜ, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹಧನ ನೀಡಲಾಗುತ್ತದೆ.

8. **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ(2401-00-108-1-15):** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತದೆ.

9. **ಕೃಷಿ ವಿಸ್ತರಣೆ ಉಪ ಅಭಿಯಾನ (2401-00-109-0-34):** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯ ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರ / ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

10. **ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM)(2401-00-113-0-02):** ಈ ಯೋಜನೆಯಡಿ ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ರೈತರಿಗೆ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ ನಾಟಿ ಮಾಡುವ ಉಪಕರಣಗಳು, ಸಸ್ಯ

ಸಂರಕ್ಷಣಾ ಉಪಕರಣಗಳು, ಶುಗರ್ ಕೇನ್ ಹಾರ್ವೆಸ್ಟರ್, ಕಂಬೈನ್ಡ್ ಹಾರ್ವೆಸ್ಟರ್, ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗಿರುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ಖರೀದಿಸಲು ರೈತರಿಗೆ ಹಣಕಾಸಿನ ನೆರವು ಮತ್ತು ಬಾಡಿಗೆ ಆಧಾರಿತ ಸೇವಾ ಕೇಂದ್ರಗಳಿಗೆ ಗ್ರಾಮ ಮಟ್ಟದ ಯಂತ್ರೋಪಕರಣಗಳ ಬ್ಯಾಂಕ್/ ಹೈಟೆಕ್ ಉಪಕರಣಗಳ ಹಬ್ ಗಾಗಿ ಹಣಕಾಸಿನ ನೆರವು ನೀಡಲಾಗುವುದು.

11. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (2401-00-800-1-57):** ಈ ಯೋಜನೆಯಡಿ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಹೆಚ್ಚಿನ ಸಾರ್ವಜನಿಕ ಹೂಡಿಕೆಗಾಗಿ ರಾಜ್ಯಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಜಿಲ್ಲಾ ಕೃಷಿ ಯೋಜನೆಗಳಲ್ಲಿ ಸ್ಥಳೀಯ ಆದ್ಯತೆಗಳು/ ಅವಶ್ಯಕತೆಗಳು/ ಬೆಳೆಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು, ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಮುಖ್ಯ ಬೆಳೆಗಳ ಉತ್ಪಾದಕತೆಯಲ್ಲಿ ಇರುವ ವ್ಯತ್ಯಯದ ಪ್ರಮಾಣವನ್ನು ಕಡಿತಗೊಳಿಸಲು, ಕೃಷಿ ಮತ್ತು ಸಂಬಂಧಿತ ವಲಯಗಳ ಎಲ್ಲಾ ಅವಶ್ಯಕತೆಗಳನ್ನು ತೆಗೆದುಕೊಂಡು ಉತ್ಪಾದನೆ/ ಉತ್ಪಾದಕತೆಯ ವಿವಿಧ ಘಟಕಗಳಲ್ಲಿ ಬದಲಾವಣೆ ತರಲು ಮತ್ತು ರೈತರಿಗೆ ಹೆಚ್ಚಿನ ಲಾಭಾಂಶ ದೊರಕಿಸಿಕೊಡಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಈ ಸಂಬಂಧ, ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆ/ ಸಂಸ್ಥೆಗಳಿಂದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

12. **ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03):** ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಪ್ರತಿ ಹೆಕ್ಟೇರಿಗೆ ಗರಿಷ್ಠ ರೂ.2500/- ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ.

13. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (2408-01-103-0-01):** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಸಂಸ್ಥೆಯಾಗಿರುತ್ತದೆ.

14. **ಸಂಚಾರಿ ಸಸ್ಯ ಚಿಕಿತ್ಸಾಲಯ(ಕೃಷಿ ಸಂಜೀವಿನಿ):** ಪ್ರಮುಖವಾಗಿ ಕೃಷಿ ಬೆಳೆಗಳಲ್ಲಿ ಉತ್ಪಾದನಾ ತೊಡಕುಗಳಾದ ಕೀಟ, ರೋಗ, ಕಳೆ ಮತ್ತು ಮಣ್ಣು ನಿರ್ವಹಣೆಗೆ ತಾಂತ್ರಿಕ ಸಲಹೆಗಳನ್ನು ನೀಡಲು ಹಾಗೂ ನಿಯಮಿತವಾಗಿ ಮೇಲ್ವಿಚಾರಣೆ ಮಾಡುವ ಉದ್ದೇಶದಿಂದ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪಿಸಲಾಗಿರುತ್ತದೆ. ಕೃಷಿ ಸಂಜೀವಿನಿ ಸ್ಥಾಪನೆಯಿಂದ ಪೀಡೆ ಸರ್ವೇಕ್ಷಣಾ ಮತ್ತು ಸಲಹಾ ಘಟಕಗಳು ಹೆಚ್ಚಿನ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಸಹಕಾರಿಯಾಗುತ್ತದೆ.

15. **ಸೆಕಂಡರಿ ಕೃಷಿ ನಿರ್ದೇಶನಾಲಯ (2401-00-001-1-14):** ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಪ್ರಾಣಿಜನ್ಯ ಉತ್ಪನ್ನಗಳ ಸಂಸ್ಕರಣೆ, ಗ್ರಾಮೀಣ ಮತ್ತು ಗುಡಿ ಕೈಗಾರಿಕೆಗಳ ಮೂಲಕ ರೈತರಿಗೆ ಹೆಚ್ಚಿನ ಆದಾಯ ತರಲು ಹಾಗೂ ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಉದ್ಯೋಗ ಸೃಜನೆಗೆ ಪೂರಕವಾಗಿ, ಕೃಷಿ ಉತ್ಪನ್ನಗಳಿಂದ ಉಪ ಉತ್ಪನ್ನಗಳ ತಯಾರಿಕೆ ಮತ್ತು ಮಾರುಕಟ್ಟೆ ಸಂಪರ್ಕಕ್ಕೆ ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸಲು ಸುಸ್ಥಿರ ಹಾಗೂ ಕ್ರೋಢೀಕೃತ ವ್ಯವಸ್ಥೆಗಾಗಿ ರಾಜ್ಯ ಸೆಕೆಂಡರಿ ಕೃಷಿ ನಿರ್ದೇಶನಾಲಯವನ್ನು ಅಧಿಸೂಚಿಸಲಾಗಿದ್ದು, ವಿವಿಧ ಇಲಾಖೆಗಳ ಕಾರ್ಯಕ್ರಮಗಳನ್ನು ಸಂಯೋಜಿಸಿ ಅನುಷ್ಠಾನಗೊಳಿಸಲಾಗುವುದು.

16. **ಸಮಗ್ರ ಕೃಷಿ ಪದ್ಧತಿ:** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತ್ಯಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವುದು ಮುಖ್ಯ ಧ್ಯೇಯದೊಂದಿಗೆ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಒಂದು ಹೆಕ್ಟೇರ್ ಪ್ರದೇಶ ಮಾದರಿಯಲ್ಲಿ ನೀರು ಸಂರಕ್ಷಣೆಗೆ ವಿವಿಧ ಅಳತೆಗಳ ಚಿಕ್ಕ ಹೊಂಡಗಳ ನಿರ್ಮಾಣ, ಸಾರಜನಕ ಸ್ಥಿರೀಕರಣಕ್ಕೆ ಪೂರಕವಾದ ಸಸ್ಯಬೇಲಿ /ಇತರೆ ಬೇಲಿ/ ಮಿಶ್ರ ಸಂರಕ್ಷಣೆಗೆ, ರಕ್ಷಣಾತ್ಮಕ ತಡೆಗಳು/ಬದುಗಳು/ಟ್ರೆಂಚ್ ನಿರ್ಮಾಣಕ್ಕಾಗಿ, ಸ್ಥಳೀಯ ಬೇಡಿಕೆಗನುಗುಣವಾಗಿ ಎರೆಹುಳು ಗೊಬ್ಬರ, ಅಜೋಲ್ಲಾ, ಮರ ಆಧಾರಿತ ಕೃಷಿ, ಕೈತೋಟ, ಸಣ್ಣ ಪ್ರಮಾಣದ ಕುರಿ/ ಮೇಕೆ/ ಕೋಳಿ ಹಾಗೂ ಮೇವಿನ ಬೆಳೆಗಳು ಸ್ಥಳೀಯ ಚಟುವಟಿಕೆಗಳು ಇತ್ಯಾದಿಗಳಿಗೆ ಸಹಾಯಧನವನ್ನು ನೀಡಲಾಗುವುದು.

17. **ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ (2202-80-107-0-06):** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ಭೂ ರಹಿತ ಕೃಷಿ ಕಾರ್ಮಿಕರು/ ರೈತರ ಮಕ್ಕಳಿಗೆ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ/ ಭೂ ರಹಿತ ಕೃಷಿ ಕಾರ್ಮಿಕರ ಕುಟುಂಬದ ಹೆಣ್ಣು ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದು.

ಕೃಷಿ ನಿರ್ದೇಶಕರು

<u>ಅನುಬಂಧ-2(LCQ 1427)</u>

## ಕೃಷಿ ಇಲಾಖೆಯ ಯೋಜನೆಗಳಡಿ ಸೌಲಭ್ಯಗಳನ್ನು ಪಡೆಯಲು ಇರುವ ಮಾನದಂಡಗಳ ವಿವರ

| ಕ್ರ. ಸಂ | ಫಲಾನುಭವಿ ಆಧಾರಿತ ಯೋಜನೆ/ ಕಾರ್ಯಕ್ರಮ | ಮಾನದಂಡಗಳ ವಿವರ |
|---|---|---|
| 1 | ಬಿತ್ತನೆ ಬೀಜಗಳ ಪೂರೈಕೆ | ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ (ಸಾಮಾನ್ಯ ರೈತರಿಗೆ ಶೇ 50ರ ವರೆಗೆ ಹಾಗು ಪರಿಶಿಷ್ಟ ವರ್ಗ ಮತ್ತು ಪರಿಶಿಷ್ಟ ಪಂಗಡದವರಿಗೆ ಶೇ.75 ರ ವರೆಗೆ) ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬಿತ್ತನೆ ಬೀಜ ವಿತರಣೆಯಲ್ಲಿ ರೈತರ ಪಹಣಿಯಲ್ಲಿನ ವಿವರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ. ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗುತ್ತದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು. |
| 2 | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನ | ಈ ಯೋಜನೆಯಡಿ ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಇತರೆ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಥಮವಾಗಿ ಅಧಿಸೂಚಿಸಲಾಗುತ್ತದೆ. ಅಂತಿಮ ದಿನಾಂಕದೊಳಗೆ ರೈತರಿಂದ ಪ್ರೀಮಿಯಂ ಪಡೆದು ಬ್ಯಾಂಕ್ / ಸಹಕಾರ ಸಂಸ್ಥೆ / ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತದೆ ದಾಖಲೆಗಳನ್ನು ಪರಿಶೀಲಿಸಿ ಅರ್ಹ ರೈತರ ಪ್ರಸ್ತಾವನೆಗಳನ್ನು ಸಂಬಂಧಿಸಿದ ವಿಮಾ ಸಂಸ್ಥೆಗಳಿಗೆ ಅಂಗೀಕರಿಸಲು ರವಾನಿಸಲಾಗುತ್ತದೆ. ಈ ಯೋಜನೆಯು ಸಾಲ ಪಡೆದಂತಹ ರೈತರಿಗೆ ಕಡ್ಡಾಯವಾಗಿದ್ದು, ಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿರುತ್ತದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕ್ಷೇತ್ರಾಧಾರಿತ ಹಾಗೂ ಇಳುವರಿ ಆಧಾರಿತ ಯೋಜನೆಯಾಗಿದ್ದು, ಮಾರ್ಗಸೂಚಿಯನುಸಾರ ಹೋಬಳಿ / ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿ ಮಾಹಿತಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ ಗ್ರಾಮ ಪಂಚಾಯಿತಿಯಲ್ಲಿ ಬೆಳೆ ವಿಮೆ ಮಾಡಿಸಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪರಿಹಾರ ಪಡೆಯಲು ಅರ್ಹರಾಗುತ್ತಾರೆ. ಅರ್ಹ ರೈತರಿಗೆ ವಿಮೆ ಪರಿಹಾರ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವಿಮಾ ಸಂಸ್ಥೆಯವರು ವರ್ಗಾಯಿಸುತ್ತಾರೆ. |
| 3 | ಬೆಳೆ ಸಮೀಕ್ಷೆ ಕಾರ್ಯಕ್ರಮ | ಪಹಣಿ ಹೊಂದಿರುವ ಎಲ್ಲಾ ಹಿಡುವಳಿದಾರರು |

| | | |
|---|---|---|
| 4 | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ (PMKISAN) | ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕ ರೂ.6000/-ಗಳ ಆರ್ಥಿಕ ಸಹಾಯವನ್ನು ನೀಡಲಾಗುತ್ತಿದೆ. ಸದರಿ ಸಹಾಯವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಇದರ ಜೊತೆಗೆ ಕರ್ನಾಟಕ ರಾಜ್ಯ ಸರ್ಕಾರದಿಂದ ರೂ.4000/-ಗಳನ್ನು ಎರಡು ಕಂತುಗಳಲ್ಲಿ ನೀಡಲಾಗುವುದು.<br>ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಘೋಷಣೆಯ ಆಧಾರದಲ್ಲಿ ಕೆಳಕಂಡ ಮಾನದಂಡಗಳನ್ನು ಹೊಂದಿರುವ ರೈತ ಕುಟುಂಬವು ಯೋಜನೆಯ ಫಲಾನುಭವಿಯಾಗಲು ಅರ್ಹರಿರುವುದಿಲ್ಲ<br>i. ಭೂಮಿ ಹೊಂದಿರುವ ಸಂಘ ಅಥವಾ ಸಂಸ್ಥೆಗಳು.<br>ii. ಕೆಳಕಾಣಿಸಿದ ವರ್ಗಗಳಲ್ಲಿ ಕುಟುಂಬ ಸದಸ್ಯರು ಇದ್ದಲ್ಲಿ.<br>a) ಮಾಜಿ ಮತ್ತು ಹಾಲಿ ಸಾಂವಿಧಾನಿಕ ಹುದ್ದೆಗಳು<br>b) ಮಾಜಿ ಮತ್ತು ಹಾಲಿ ಸಚಿವರು/ರಾಜ್ಯ ಸಚಿವರು / ರಾಜ್ಯ ವಿಧಾನ ಸಭೆ / ವಿಧಾನ ಪರಿಷತ್ತಿನ ಸದಸ್ಯರು / ನಗರ ಸಭೆ ಅಧ್ಯಕ್ಷರು/ ಪುರ ಸಭೆ ಅಧ್ಯಕ್ಷರು /ಜಿಲ್ಲಾ ಪಂಚಾಯಿತಿ ಅಧ್ಯಕ್ಷರು<br>c) ನಿವೃತ್ತ / ಹಾಲಿ ಸೇವೆಯಲ್ಲಿರುವ ಕೇಂದ್ರ / ರಾಜ್ಯ ಸರ್ಕಾರಗಳ /ಸಚಿವಾಲಯ ಕಛೇರಿ/ಇಲಾಖೆ, ಕ್ಷೇತ್ರ ಕಛೇರಿಗಳು/ ಕೇಂದ್ರ / ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು, ಅಂಗ ಸಂಸ್ಥೆಗಳು / ಸ್ವಾಯತ್ತ ಸಂಸ್ಥೆಗಳು ಅಧಿಕಾರಿಗಳು ಹಾಗೂ ನೌಕರರು/ ಸ್ಥಳೀಯ ಸಂಸ್ಥೆಗಳ ಖಾಯಂ ನೌಕರರು (ಗ್ರೂಪ್-ಡಿ / 4ನೇ ವರ್ಗ / Multi Tasking Staff ಹೊರತುಪಡಿಸಿ)<br>d) ರೂ.10,000/- ಅಥವಾ ಹೆಚ್ಚಿನ ಮೊತ್ತ ಪಡೆಯುತ್ತಿರುವ ವಯೋ ನಿವೃತ್ತ / ನಿವೃತ್ತ ಪಿಂಚಣಿದಾರರು. (ಗ್ರೂಪ್-ಡಿ / 4ನೇ ವರ್ಗ / Multi Tasking Staff ಹೊರತುಪಡಿಸಿ)<br>e) ಕಳೆದ ಸಾಲಿನ ಆದಾಯ ತೆರಿಗೆ ಪಾವತಿದಾರರು. ವೈದ್ಯ, ಅಭಿಯಂತರ, ವಕೀಲ, ಲೆಕ್ಕ ಪರಿಶೋಧಕರು, ವಾಸ್ತುಶಿಲ್ಪದಂತಹ ವೃತ್ತಿ ಪರರು ಮತ್ತು ವೃತ್ತಿ ಪರ ಸಂಸ್ಥೆಯಲ್ಲಿ ನೊಂದಾಯಿತ ಸದರಿ ವೃತ್ತಿಯನ್ನು ಕೈಗೊಳ್ಳುತ್ತಿರುವವರು. |
| 5 | ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮ | ಅ) 8, 9 ಮತ್ತು 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ/ಭೂರಹಿತ ಕೃಷಿ ಕಾರ್ಮಿಕರ ಹೆಣ್ಣು ಮಕ್ಕಳು ಮತ್ತು ಎಸ್.ಎಸ್.ಎಲ್.ಸಿ / 10 ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್-ಗಳ ವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ/ ಭೂರಹಿತ ಕೃಷಿ ಕಾರ್ಮಿಕರ ಮಕ್ಕಳು ಈ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.<br>ಆ) ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. |

| | | |
|---|---|---|
| 6 | ರೈತ ಸಿರಿ | ಸಿರಿಧಾನ್ಯಗಳಾದ ನವಣೆ, ಹಾರಕ, ಸಾಮೆ, ಕೊರಲೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10,000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು. ಸಿರಿಧಾನ್ಯಗಳನ್ನು ಬೆಳೆದ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ವಿತರಿಸಲಾಗುತ್ತಿದೆ. |
| 7 | ಸೂಕ್ಷ್ಮ ನೀರಾವರಿ | ಹನಿ / ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ ಶೇ.90 ರಷ್ಟು ಸಹಾಯಧನ (2.00 ಹೆಕ್ಟೇರ್ ವರೆಗೆ) ಒದಗಿಸಲಾಗುತ್ತಿದೆ. ಇದಕ್ಕಾಗಿ Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. (ಪಹಣಿ) ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್‌ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಬೇಕು. ರೈತರು ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರಿಗೆ ವಿತರಿಸಿದ / ರೈತರ ಹೊಲದಲ್ಲಿ ಅನುಷ್ಠಾನ ಮಾಡಿದ ಲಘು ನೀರಾವರಿ ಸಲಕರಣೆಗಳಿಗೆ ಸಹಾಯಧನ ಒದಗಿಸಲಾಗುವುದು. |
| 8 | ಕೃಷಿ ಯಾಂತ್ರೀಕರಣ ಹಾಗೂ ಕೃಷಿ ಉತ್ಪನ್ನಗಳ ಸಂಸ್ಕರಣೆ | ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ನಾಟಿ / ಬಿತ್ತನೆ ಉಪಕರಣಗಳು, ಟ್ರ್ಯಾಕ್ಟರ್ / ಶಕ್ತಿಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಕೊಯಿಲು ಮತ್ತು ಒಕ್ಕಣೆ ಮಾಡುವ ಉಪಕರಣಗಳು ಕೃಷಿ ಸಂಸ್ಕರಣಾ ಘಟಕಗಳು ಹಾಗೂ ಡೀಸಲ್ ಪಂಪ್ ಸೆಟ್‌ಗಳನ್ನು ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಹಾಗು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಠ ಮಿತಿ ರೂ. ಒಂದು ಲಕ್ಷದವರೆಗೆ ನೀಡಲಾಗುತ್ತಿದೆ. ಸಣ್ಣ ಟ್ರ್ಯಾಕ್ಟರ್‌ಗಳ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ರೂ.3.00ಲಕ್ಷ ಹಾಗು ಸಾಮಾನ್ಯ ರೈತರಿಗೆ ರೂ.1.0ಲಕ್ಷಗಳಂತೆ ಗರಿಷ್ಠ ಸಹಾಯಧನವನ್ನು ನೀಡಲಾಗುತ್ತದೆ.<br>ಇದಕ್ಕಾಗಿ Farmer Registration and Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್ ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಬೇಕು. ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರು ಪಡೆದ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು. |

| | | |
|---|---|---|
| 9 | ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ | ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತಿದೆ. |
| 10 | ಸಸ್ಯ ಸಂರಕ್ಷಣೆ | ಶೇ.50ರ ರಿಯಾಯಿತಿಯಲ್ಲಿ ಸಸ್ಯ ಸಂರಕ್ಷಣಾ ಪೀಡೆನಾಶಕಗಳನ್ನು ವಿತರಣೆ ಮಾಡಲಾಗುತ್ತಿದೆ. ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು. |
| 11 | ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ | ಎರೆಹುಳು ಗೊಬ್ಬರ, ಸಾವಯವ ಗೊಬ್ಬರ, ರಂಜಕಯುಕ್ತ ಸಾವಯವ ಗೊಬ್ಬರ, ಸಿಟಿ ಕಾಂಪೋಸ್ಟ್ ರಿಯಾಯತಿ ದರದಲ್ಲಿ ವಿತರಣೆ ಮಾಡುವುದು. ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ನೀಡಲಾಗುತ್ತದೆ. |
| 12 | ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ | ವಿವಿಧ ದ್ವಿದಳ ಧಾನ್ಯ ಬೀಜಗಳು ಮತ್ತು ಹಸಿರೆಲೆ ಗೊಬ್ಬರ ಬೀಜಗಳನ್ನು ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ನೀಡಲಾಗುತ್ತದೆ. |
| 13 | ಕೃಷಿ ವಿಸ್ತರಣಾ ಉಪ ಅಭಿಯಾನ (SAME-ATMA) | ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ |
| 14 | ಮಣ್ಣಿನ ಫಲವತ್ತತೆ ಯೋಜನೆ | ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಪ್ರತಿ ಹೆಕ್ಟೇರಿಗೆ ಗರಿಷ್ಠ ರೂ.2500/- ಸಹಾಯಧನ ನೀಡಲಾಗುತ್ತಿದೆ. |
| 15 | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ | ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುವುದು. |

| | | |
|---|---|---|
| 16. | ರೈತ ಶಕ್ತಿ | ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಹಾಗೂ ಇಂಧನ ವೆಚ್ಚದ ಭಾರವನ್ನು ಕಡಿಮೆ ಮಾಡಲು ಪ್ರತಿ ಎಕರೆಗೆ ರೂ.250.0ರಂತೆ ಗರಿಷ್ಠ 5 ಎಕರೆಗಳಿಗೆ ಡಿ.ಬಿ.ಟಿ ಮೂಲಕ ಡೀಸೆಲ್ ಗೆ ಸಹಾಯಧನವನ್ನು ನೀಡಲಾಗುವುದು. Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೊಂದಣಿಗೊಂಡ ರಾಜ್ಯದ ಎಲ್ಲಾ ರೈತರು ಈ ಯೋಜನೆಯ ಫಲಾನುಭವಿಗಳಾಗಿರುತ್ತಾರೆ ಹಾಗೂ ಈ ಯೋಜನೆಯು ಅರ್ಹತಾಧಾರಿತ ಯೋಜನೆಯಾಗಿರುವುದರಿಂದ ಯಾವುದೇ ರೈತರು ಪ್ರತ್ಯೇಕವಾಗಿ ವೈಯಕ್ತಿಕ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ದಾಖಲೆಗಳ ಪರಿಶೀಲನೆಯನ್ನು ಸರ್ಕಾರದ FRUITS ಪೋರ್ಟಲ್ ನಲ್ಲಿ ಲಭ್ಯವಿರುವ ದತ್ತಾಂಶಗಳ ಆಧಾರದ ಮೇಲೆ ಮಾಡಲಾಗುವುದು. FRUITS ಪೋರ್ಟಲ್‌ನಲ್ಲಿ ನಮೂದಿಸಲಾದ ಹಿಡುವಳಿಯ ವಿಸ್ತೀರ್ಣದ ಆಧಾರದ ಮೇಲೆ ರೈತರಿಗೆ ಡೀಸೆಲ್ ಸಹಾಯಧನವನ್ನು ನೇರ ನಗದು ವರ್ಗಾವಣೆ (DBT) ಮೂಲಕ ರೈತರ ಖಾತೆಗೆ ವರ್ಗಾಯಿಸಲಾಗುವುದು. ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ಅವರು ಹೊಂದಿರುವ ಜಮೀನಿನ ಆಧಾರದ ಮೇಲೆ ಸಹಾಯಧನವನ್ನು ನೀಡಲಾಗುವುದು. |

ಕೃಷಿ ನಿರ್ದೇಶಕರು